1097 (1705) ಶ್ರೀ ನಿರಾಣಿ ಮುರಗೇಶ್ ರುದ್ರಪ್ಪ (ಬೀಳಗಿ): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀಳಗಿ ಮತ ಕ್ಷೇತ್ರ ವ್ಯಾಪ್ತಿಯಲ್ಲಿ ಅಭಿವೃದ್ಧಿಯಲ್ಲಿರುವ ಏತ ನೀರಾವರಿ ಯೋಜನೆಗಳು ಎಷ್ಟು ಮತ್ತು ಅವು ಯಾವುವು;

ಆ) ಈ ಯೋಜನೆಗಳು ಯಾವ ಯಾವ ಹಂತದಲ್ಲಿವೆ ಹಾಗೂ ಅವುಗಳ ಯೋಜನಾ ವೆಚ್ಚವೆಷ್ಟು ಹಾಗೂ ಅವುಗಳನ್ನು ಯಾವ ಯಾವ ನಿರ್ದಿಷ್ಟ ಅವಧಿಯೊಳಗೆ ಪೂರ್ಣಗೊಳಿಸಲಾಗುವುದು?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) :

ಅ) ಈ ಮತಕ್ಷೇತ್ರ ವ್ಯಾಪ್ತಿಯ ಜಮಖಂಡಿ ತಾಲ್ಲೂಕಿನಲ್ಲಿ ಒಂದು ಸಣ್ಣ ನೀರಾವರಿ ಇಲಾಖೆಯ ಏತ ನೀರಾವರಿ ಯೋಜನೆ ಇದೆ. ಇದು ಹಿರೇಪಡಸಲಗಿ ಏತ ನೀರಾವರಿ ಯೋಜನೆಯಾಗಿದ್ದು, ಈ ಯೋಜನೆಯ ಪುನರುಜ್ಜೀವನ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.

ಆ) ಯೋಜನೆಯ 263.00 ಲಕ್ಷ ರೂ.ಗಳ ಅಂದಾಜು ಪಟ್ಟಿಗೆ ಸರ್ಕಾರದ ಆದೇಶ ಸಂಖ್ಯೆ: ಸನೀಇ 91 ನಯೋಕಾ 2006 ದಿನಾಂಕ 04.07.2006ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಯೋಜನೆಯನ್ನು ಗುತ್ತಿಗೆ ಆಧಾರದ ಮೇಲೆ ಕೈಗೆತ್ತಿಕೊಂಡು ಡಿಸೆಂಬರ್ 2007ರ ಅಂತ್ಯಕ್ಕೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

ಕಾನೂನು ಬಾಹಿರವಾಗಿ ಮಾರಾಟ ಮಾಡಿರುವುದು

(1579) ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ದಕ್ಷಿಣ ತಾಲ್ಲೂಕು ಕೆಂಗೇರಿ ಗ್ರಾಮದ ಸರ್ವೆ ನಂ. 213/12 ಇದರಲ್ಲಿ ಇರುವ 3 ಎಕರೆ 7 ಗುಂಟೆ ಜಮೀನನ್ನು ನ್ಯಾಯಾಲಯ ಮುಟ್ಟುಗೋಲು ಹಾಕಿಕೊಂಡಿರುವುದು ನಿಜವೇ?

ಆ) ಈ ಜಮೀನನ್ನು ನ್ಯಾಯಾಲಯ ಮುಟ್ಟುಗೋಲು ಹಾಕಿಕೊಂಡಿದ್ದರೂ ಬಾಪೂಜಿ ಗೃಹ ನಿರ್ಮಾಣ ಸಹಕಾರ ಸಂಘದ ಹಿಂದಿನ ಅಧ್ಯಕ್ಷರವರು ಕಾನೂನು ಬಾಹಿರವಾಗಿ ಮಾರಾಟ ಮಾಡಿರುವುದು ನಿಜವೇ?

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಈ) ಸದರಿ ಜಮೀನನ್ನು ಕಾನೂನು ಬಾಹಿರವಾಗಿ ಮಾರಾಟ ಮಾಡಿರುವುದನ್ನು ರದ್ದುಪಡಿಸಿ, ಸೇರಬೇಕಾದ ಸಂಘದ ಸದಸ್ಯರಿಗೆ ನಿವೇಶನ ಹಂಚಲು ಕ್ರಮಕೈಗೊಳ್ಳಲಾಗುವುದೇ?

ಉ) ಹಾಗಿದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) :

ಅ) ನ್ಯಾಯಾಲಯವು ಈ ಜಮೀನನ್ನು ಮುಟ್ಟುಗೋಲು ಹಾಕಿಕೊಂಡಿರುವುದಿಲ್ಲ. ಆದರೆ ಸಹಕಾರ ಸಂಘಗಳ ಉಪನಿಬಂಧಕರು-1 ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಇವರು

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 103 ರಡಿ ದಿನಾಂಕ: 18–2–2002 ರಂದು ಆದೇಶಕ್ಕಿಂತ ಪೂರ್ವದಲ್ಲಿ ಆಸ್ತಿಯ ಜಪ್ತಿ ಆದೇಶ ಹೊರಡಿಸಿರುತ್ತಾರೆ.

ಆ) ನ್ಯಾಯಾಲಯವು ಮುಟ್ಟುಗೋಲು ಹಾಕಿಕೊಂಡಿರುವುದಿಲ್ಲ. ಆದರೆ ಸಂಘದ ಹಿಂದಿನ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಜಮೀನುಗಳನ್ನು ಅವರುಗಳ ಹೆಸರಿನಲ್ಲಿ ಜಿ.ಪಿ.ಎ ಮಾಡಿಕೊಂಡಿದ್ದು, ತರುವಾಯ ಮಾರಾಟ ಮಾಡಿರುತ್ತಾರೆ. ಪ್ರಸ್ತುತ ಹಿರಿಯ ಉಪ ನೊಂದಣಾಧಿಕಾರಿ, ಕೆಂಗೇರಿ, ಬೆಂಗಳೂರು ಇವರು ದಿನಾಂಕ: 24–12–2005 ರಂದು ನಿಗದಿತ ಶುಲ್ಕ ಪಾವತಿ ಮಾಡದೇ ಇದ್ದ ಕಾರಣ ತಡೆಹಿಡಿದು ತರುವಾಯ ಪೂರ್ಣ ಶುಲ್ಕ ಪಾವತಿ ಪಡೆದು 1ನೇ ಪುಸ್ತಕದ ದಸ್ತಾವೇಜು ನಂಬರ್ ಕೆಇಎಸ್–1–08556–2006–07 ಆಗಿ ಸಿಡಿ ನಂಬರ್ ಕೆಇಎಸ್‌ಡಿ 296ರಲ್ಲಿ ದಿನಾಂಕ: 08–06–2006ರಂದು ನೋಂದಾಯಿಸಲಾಗಿದೆ.

ಇ) ಸಹಕಾರ ಸಂಘಗಳ ಉಪ ನಿಬಂಧಕರು–1 ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಇವರ ದಿನಾಂಕ: 27–5–2002ರ ಅವಾರ್ಡ್ ರೀತ್ಯಾ ಇ.ಪಿ.ಪಡೆದು ಬಹಿರಂಗ ಹರಾಜು ಮಾಡಲು 11–8–2006 ರಂದು ದಿನಾಂಕ ನಿಗದಿಪಡಿಸಿದೆ. ಆದರೆ ಹಿಂದಿನ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಕಾನೂನು ಬಾಹಿರವಾಗಿ ಆಸ್ತಿ ಮಾರಾಟ ಮಾಡಿರುವುದರಿಂದ ಸಂಘವು ಈ ಬಗ್ಗೆ ಬ್ಯಾಟರಾಯನಪುರ ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ಕೇಸ್ ದಾಖಲಿಸಿರುತ್ತದೆ. (ಸಿಸಿ ನಂ.11960/06). ಅಲ್ಲದೆ, ಇನ್ಸ್‌ಪೆಕ್ಟರ್ ಜನರಲ್ ಆಫ್ ರಿಜಿಸ್ಟ್ರೇಷನ್ (ಇಂಟಲಿಜನ್ಸ್), ಬೆಂಗಳೂರು ನಗರ ಜಿಲ್ಲೆ ಇವರ ನ್ಯಾಯಾಲಯದಲ್ಲಿ ದಿನಾಂಕ: 07–4–2006 ರಂದು ನೋಂದಣಿ ಪೂರ್ವದಲ್ಲಿ ಆಕ್ಷೇಪಣೆ ಸಲ್ಲಿಸಿರುತ್ತದೆ.

ಈ) ಜಮೀನನ್ನು ಬಹಿರಂಗ ಹರಾಜಿನ ಮೂಲಕ ಮಾರಾಟ ಮಾಡಿ ದುರುಪಯೋಗವಾಗಿರುವ ಮೊತ್ತವನ್ನು ವಸೂಲು ಮಾಡಬೇಕಾದ್ದರಿಂದ ಈ ಜಮೀನಿನಲ್ಲಿ ನಿವೇಶನ ಹಂಚುವ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ವಿವಿಧ ಪ್ರಕರಣಗಳು ನ್ಯಾಯಾಲಯಗಳಲ್ಲಿ ಬಾಕಿ ಇರುವುದರಿಂದ ನಿರ್ದಿಷ್ಟ ಅವಧಿ ನಿಗದಿಪಡಿಸಲು ಸಾಧ್ಯವಿರುವುದಿಲ್ಲ.

ಆರಕ್ಷಕ ಠಾಣೆಯ ಕಟ್ಟಡ ನಿರ್ಮಾಣ ಹಾಗೂ ಕಟ್ಟಡಗಳ ದುರಸ್ತಿ.

286 (1438) ಶ್ರೀ ಸಿಂಧೂರ ಜಿ. ರಾಜಶೇಖರ (ಶಿಗ್ಗಾಂವ್): ಮಾನ್ಯ ಗೃಹ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸವಣೂರ ತಾಲ್ಲೂಕು ಯಲವಗಿ ಹಾಗೂ ಹತ್ತಿಮತ್ತೂರ ಎರಡು ಗ್ರಾಮಗಳಲ್ಲಿ ಜನಸಂಖ್ಯೆ ಹೆಚ್ಚಿಗೆ ಇದ್ದು, ಆ ಗ್ರಾಮಗಳಲ್ಲಿ ಆರಕ್ಷಕ ಠಾಣೆ ಪ್ರಾರಂಭಿಸುವುದು ಅತೀ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಆರಕ್ಷಕ ಠಾಣೆ ಪ್ರಾರಂಭ ಮಾಡಲಿಕ್ಕೆ ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳೇನು?